**OCTOBER 30,2024**
**ALL INDIA RADIO- DHARWAD**
**PRADESH SAMACHARA (KANNADA)**

**ಮುಖ್ಯಾಂಶಗಳು:**

- **ಆಧುನಿಕ ವಿಜ್ಞಾನ ಮತ್ತು ಭಾರತದ ಪ್ರಾಚೀನ ಜ್ಞಾನದ ಸೂಕ್ತ ಸಮನ್ವಯ: ಆರೋಗ್ಯ ವಲಯದಲ್ಲಿ ಮಹತ್ತರ ಬದಲಾವಣೆ – ಪ್ರಧಾನಮಂತ್ರಿ ನರೇಂದ್ರ ಮೋದಿ.**

- **ಉದ್ಯೋಗಮೇಳದಲ್ಲಿ 51 ಸಾವಿರ ಉದ್ಯೋಗಿಗಳಿಗೆ ನೇಮಕಾತಿ ಪತ್ರ ವಿತರಣೆ: ರಾಜ್ಯದ ಹಲವೆಡೆ ಕೇಂದ್ರ ಸಚಿವರು ಭಾಗಿ.**

- **ವಕ್ಫ್ ಆಸ್ತಿ: ರೈತರಿಗೆ ನೀಡಿರುವ ನೋಟಿಸ್ ವಾಪಸ್; ಯಾವ ರೈತರನ್ನೂ ಜಮೀನುಗಳಿಂದ ಒಕ್ಕಲೆಬ್ಬಿಸುವುದಿಲ್ಲ – ಮುಖ್ಯಮಂತ್ರಿ ಸಿದ್ದರಾಮಯ್ಯ.**

- **ಎಲ್ಲ ಜಿಲ್ಲೆಗಳಲ್ಲಿ ರೈತ ತರಬೇತಿ ಕೇಂದ್ರಗಳ ಸ್ಥಾಪನೆ – ಸಚಿವ ಎನ್. ಚೆಲುವರಾಯಸ್ವಾಮಿ.**

<><><>

**ವಾರ್ತೆಗಳ ವಿವರ...**

**ಆಧುನಿಕ ವಿಜ್ಞಾನ ಮತ್ತು ಭಾರತದ ಪ್ರಾಚೀನ ಜ್ಞಾನದ ಸೂಕ್ತ ಸಮನ್ವಯದೊಂದಿಗೆ** ಆರೋಗ್ಯ ವಲಯದಲ್ಲಿ ಮಹತ್ತರ ಬದಲಾವಣೆ ತರಲು ಸಕಲ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. **ಧನ್ವಂತರಿ ಜಯಂತಿ ಅಂಗವಾಗಿ ಸುಮಾರು** 12 ಸಾವಿರದ 850 ಕೋಟಿ ರೂಪಾಯಿ ಮೌಲ್ಯದ ವಿವಿಧ ಆರೋಗ್ಯ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು; ಭಾರತದ ಯೋಗ, ಪಂಚಕರ್ಮ, ಧ್ಯಾನ ಮುಂತಾದ ಪ್ರಾಚೀನ ಜ್ಞಾನಗಳತ್ತ ಇಂದು ಇಡೀ ಜಗತ್ತು ಆಕರ್ಷಿತವಾಗಿದ್ದು, ರಾಷ್ಟ್ರ ವೈದ್ಯಕೀಯ ಪ್ರವಾಸದ ತಾಣವಾಗಿ ಹೊರಹೊಮ್ಮಿದೆ. ಭಾರತ ಅಲ್ಲದೆ, ಇತರ ದೇಶಗಳಲ್ಲೂ ಆಯು ್ ತಜ್ಞರಿಗೆ ಬೇಡಿಕೆ ಹೆಚ್ಚುತ್ತಿದೆ. ಇದರಿಂದ ದೇಶದ ಯುವಜನರಿಗೆ ಉದ್ಯೋಗಾವಕಾಶ ಸೃಷ್ಟಿಯಾಗುತ್ತಿರುವ ಜೊತೆಗೆ ಮಾನವಿಕ ಸೇವೆ ಮಾಡಲು ಅವಕಾಶ ದೊರೆಕಿದೆ ಎಂದು ತಿಳಿಸಿದರು. ಪ್ರಸ್ತುತ ದೇಶದಲ್ಲಿ 7.5 ಲಕ್ಷಕ್ಕೂ ಹೆಚ್ಚು ನೋಂದಾಯಿತ ಆಯು ್ ತಜ್ಞರಿದ್ದು, ಈ ಸಂಖ್ಯೆಯನ್ನು ಮತ್ತ ್ಟ ಹೆಚ್ಚಿಸುವ ಗುರಿ ಇದೆ ಎಂದರು.

<><><>

**ಇದೇ ಸಂದರ್ಭದಲ್ಲಿ; ಕೋಲಾರ ತಾಲ್ಲೂಕಿನ ನರಸಾಪುರದ ಕೈಗಾರಿಕಾ ಪ್ರದೇಶದಲ್ಲಿ** ನಿರ್ಮಿಸಲು ಉದ್ದೇಶಿಸಿರುವ 100 ಹಾಸಿಗೆಗಳ ಇಎಸ್ಐ ಆಸ್ಪತ್ರೆಯ ಕಟ್ಟಡ ಕಾಮಗಾರಿಗೆ ಹಾಗೂ **ರಾಯಚೂರಿನಲ್ಲಿ** 50 ಹಾಸಿಗೆಗಳ ತೀವ್ರ ನಿಘಾ ಘಟಕದ ಶುಂಕುಸ್ಥಾಪನೆಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಚಾಲನೆ ನೀಡಿದರು.

<><><>

**ದೇಶದ ಜನರಿಗೆ ಅತ್ಯಾಧುನಿಕ ಮತ್ತು ಗುಣಮಟ್ಟದ ಸೌಲಭ್ಯ ಒದಗಿಸುವುದರ** ಜೊತೆಗೆ ಉದ್ಯೋಗಾವಕಾಶ ಸೃಷ್ಟಿಸುವುದು ಸರ್ಕಾರದ ಪರಮ ಆದ್ಯತೆಯಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಕೇಂದ್ರ ಸರ್ಕಾರದ ವಿವಿಧ ಸಚಿವಾಲಯ, ಇಲಾಖೆಗಳಲ್ಲಿ ಹೊಸದಾಗಿ ನೇಮಕಗೊಂಡ 51 ಸಾವಿರ ಯುವಜನರಿಗೆ; ಬೆಂಗಳೂರು ಸೇರಿದಂತೆ ದೇಶಾದ್ಯಂತ 40 ಸ್ಥಳಗಳಲ್ಲಿ ನಡೆದ ಉದ್ಯೋಗ ಮೇಳದಲ್ಲಿ ವರ್ಚುವಲ್ ಮೂಲಕ ನೇಮಕಾತಿ ಪತ್ರಗಳನ್ನು ವಿತರಿಸಿ ಅವರು ಮಾತನಾಡಿದರು. ಕಳೆದ ಹಲವು ವ ೯ಗಳಲ್ಲಿ ಮೂಲಸೌಕರ್ಯ ವಲಯಕ್ಕೆ ಹೆಚ್ಚಿನ ಒತ್ತು ನೀಡಲಾಗಿದ್ದು, ದೇಶದ ಎಲ್ಲ ಭಾಗಗಳಲ್ಲಿ ಹೆದ್ದಾರಿ, ರಸ್ತೆ, ರೈಲು ಮಾರ್ಗ, ಬಂದರು, ವಿಮಾನ ನಿಲ್ದಾಣ, ಫೈಬರ್ ಮಾರ್ಗ ಸೇರಿದಂತೆ ವಿವಿಧ ಕಾಮಗಾರಿಗಳು ನಡೆಯುತ್ತಿವೆ. ಇದರಿಂದ ಲಾಜಿಸ್ಟಿಕ್ಸ್ ವೆಚ್ಚ ಕಡಿಮೆಯಾಗುವ ಜೊತೆಗೆ ಜನರಿಗೆ ಅತ್ಯಾಧುನಿಕ ಸೌಲಭ್ಯಗಳು ದೊರೆಯಲಿವೆ. ಇದಲ್ಲದೆ, ಯುವಜನತೆಗೆ ಹೆಚ್ಚಿನ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ ಎಂದರು.

<><><>

**ಭಾರತ ಇಂದು ಉತ್ಪಾದನೆಯ ಕೇಂದ್ರವಾಗುತ್ತಿದೆ ಎಂದು ಕೇಂದ್ರ ಸಚಿವ** ಪ್ರಲ್ಹಾದ ಜೋಶಿ ಹೇಳಿದ್ದಾರೆ. ಧಾರವಾಡದಲ್ಲಿ ಆಯೋಜಿಸಿದ್ದ ರೋಜ್ಗಾರ್ ಮೇಳಕ್ಕೆ ಚಾಲನೆ ನೀಡಿ, ನೇಮಕಾತಿ ಪತ್ರ ವಿತರಿಸಿ ಅವರು ಮಾತನಾಡಿದರು. ಭಾರತದಲ್ಲಿ ಖಾಸಗಿ ವಲಯದ ಉದ್ದಿಮೆಗಳು ಬೆಳೆಯುತ್ತಿದ್ದು, ಉತ್ತಮ ಅವಕಾಶಗಳಿವೆ. ಸಾಕ ್ಟ ಜನರು ಉತ್ಪಾದನೆಯತ್ತ ಮುಖ ಮಾಡಿದ್ದಾರೆ. ಜಗತ್ತಿಗೆ ನಮ್ಮ ಭಾರತದ ಸೇವೆ ಮತ್ತು ಉತ್ಪನ್ನಗಳು ಅವಶ್ಯವಿದೆ ಎಂದು. 10 ಲಕ್ಷಕ್ಕೂ ಹೆಚ್ಚು ನೇಮಕಾತಿ ಮಾಡಲು ಕೇಂದ್ರ ಸರ್ಕಾರ ಕಳೆದ ವ ೯ ಚರ್ಚಿಸಿ ಚಾಲನೆ ನೀಡಿ, ಇದೀಗ ಮುಂದೆ ನಡೆದಿದೆ. ಸುಮಾರು 51,000 ನೇಮಕಾತಿ ವಿತರಿಸಲಾಗುತ್ತದೆ. ಅವರೆಲ್ಲರೂ ಉತ್ತಮ ಸೇವೆ ಸಲ್ಲಿಸಿ ಬರುವ 2047ರ ವಿಕಸಿತ ಭಾರತ ಸಂದರ್ಭದಲ್ಲಿ ಅವರ ಸೇವೆ ಭಾರತಕ್ಕೆ ಒಳ್ಳೆಯ ರೀತಿಯಿಂದಾಗಲಿ ಎಂದು ಶುಭ ಹಾರೈಸಿದರು.

<><><>

**ಕೌಶಲ್ಯಾಧಾರಿತ ಉದ್ಯೋಗ ಸೃಷ್ಟಿಗೆ ಕೇಂದ್ರ ಸರ್ಕಾರ ಹೆಚ್ಚು ಒತ್ತು** ನೀಡುತ್ತಿದ್ದು, ಕಳೆದ ಬಜೆಟ್ ಯುವಜನರಲ್ಲಿ ಕೌಸಲ್ಯ ವೃದ್ಧಿಸುವ ನಿಟ್ಟಿನಲ್ಲಿ 3 ಲಕ್ಷ ಕೋಟಿಗೂ ಹೆಚ್ಚು ಹಣವನ್ನು ಮೀಸಲಿಡಲಾಗಿದೆ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ "ಉದ್ಯೋಗ ಮೇಳ" ನೇಮಕಾತಿ ಅಭಿಯಾನದ ರಾಷ್ಟ್ರೀಯ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಮೇಕ್ ಇನ್ ಇಂಡಿಯಾ, ಆತ್ಮನಿರ್ಭರ್ ಭಾರತ್ ಪರಿಕಲ್ಪನೆಗಳ ಅಡಿಯಲ್ಲಿ ಪ್ರಧಾನ ಮಂತ್ರಿಗಳು ಉದ್ಯೋಗ ಸೃಷ್ಟಿಗೆ ದೊಡ್ಡ ಪ್ರಮಾಣದಲ್ಲಿ ಉತ್ತೇಜನ ಕೊಡುತ್ತಿದ್ದಾರೆ. ಉತ್ಪಾದನಾ ಸಂಪರ್ಕ ಉತ್ತೇಜನ ಯೋಜನೆ ಮೂಲಕವೂ ಉದ್ಯೋಗ ಕ್ಷೇತ್ರದಲ್ಲಿ ದೊಡ್ಡ ಮುನ್ನಡೆ ಸಾಧಿಸಲಾಗುತ್ತಿದೆ. ಭಾರತವು 3ನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಬೇಕು ಎಂದು ತಿಳಿಸಿದರು. ಮೊದಲ ಹಂತದ ಉದ್ಯೋಗ ಮೇಳದಲ್ಲಿ ಇಲಾಖೆಯು 30,000 ಯುವ ಜನರಿಗೆ ಉದ್ಯೋಗ ನೀಡಿದೆ. ಎರಡನೇ ಹಂತದಲ್ಲಿ 20,000 ಮಂದಿಗೆ ಉದ್ಯೋಗ ನೀಡಿದೆ ಎಂದು ಕೇಂದ್ರ ಸಚಿವರು ಅಂಚೆ ಇಲಾಖೆಯನ್ನು ಶ್ಲಾಘಿಸಿದರು.

<><><>

**ಭಾರತೀಯ ರೈಲ್ವೆ ಇಲಾಖೆಯಲ್ಲಿ ಈ ವ ೯ 60 ಸಾವಿರ ಹುದ್ದೆಗಳನ್ನು** ನೇಮಕಾತಿ ಮಾಡಿಕೊಳ್ಳಲಾಗುತ್ತಿದ್ದು, ಈ ಬಾರಿ ಕರ್ನಾಟಕ ರಾಜ್ಯದ ಜನತೆಗೆ ಅನುಕೂಲವಾಗುವಂತೆ ಕನ್ನಡದಲ್ಲಿ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ಕೇಂದ್ರ ಸರ್ಕಾರದ ಜಲಶಕ್ತಿ ಹಾಗೂ ರೈಲ್ವೆ ರಾಜ್ಯ ಸಚಿವರಾದ ವಿ ಸೋಮಣ್ಣ ತಿಳಿಸಿದ್ದಾರೆ. ಮೈಸೂರಿನಲ್ಲಿ ಉದ್ಯೋಗ ಮೇಳ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು; ಮಾನ್ಯ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿಯವರು ರಾಷ್ಟ್ರೀಯ ರೋಜಗಾರ್ ಯೋಜನೆಯನ್ನು ಜಾರಿಗೆ ತಂದರು. 2014 ರಿಂದ 12 ಆವೃತ್ತಿಯಲ್ಲಿ ಉದ್ಯೋಗ ಮೇಳವನ್ನು ಮಾಡಿ ಇಲ್ಲಿಯವರೆಗೆ 14 ಲಕ್ಷಕ್ಕೂ ಹೆಚ್ಚು ಜನರಿಗೆ ಉದ್ಯೋಗ ನೇಮಕಾತಿ ಪತ್ರಗಳನ್ನು ವಿತರಿಸಲಾಗಿದೆ. ಇದರಿಂದ ಪ್ರತಿಭಾವಂತರಿಗೆ ಉದೋಗಗಳನ್ನು ನೀಡಲಾಗುತ್ತಿದೆ. ರೈಲ್ವೆ ಇಲಾಖೆಯಲ್ಲಿ 2014 ರಿಂದ ಇಲ್ಲಿಯವರೆಗೆ ಮಿಶನ್ ಮೋಡ್ ನಲ್ಲಿ 5.2 ಲಕ್ಷ ಉದ್ಯೋಗಳನ್ನು ನೀಡಲಾಗಿದೆ ಎಂದರು.

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

<><><>

**ರಾಜ್ಯ ಸರ್ಕಾರ ಒಳಮೀಸಲಾತಿ ನೀತಿಯನ್ನು ಕೂಡಲೇ ಜಾರಿ ಮಾಡಿ ಅನ್ಯಾಯಕ್ಕೆ** ಒಳಗಾದ ಸಮುದಾಯಗಳಿಗೆ ನ್ಯಾಯ ಒದಗಿಸಬೇಕು ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು; ಕಾಂಗ್ರೆಸ್ ಸರ್ಕಾರ ಒಳಮೀಸಲಾತಿ ವಿಚಾರದಲ್ಲಿ ಮೀನಾಮೇಷ ಎಣಿಸುತ್ತಿದೆ. ಒಳಮೀಸಲಾತಿ ನೀತಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಬೆಂಬಲ ವ್ಯಕ್ತಪಡಿಸಿದ್ದಾರೆ. ಆದರೆ ಕಾಂಗ್ರೆಸ್ ನಾಯಕರು ಬೆಂಬಲ ನೀಡುತ್ತಿಲ್ಲ. ಮೀಸಲಾತಿ ಜಾರಿಗೆ ಮತ್ತೊಂದು ಆಯೋಗ ರಚಿಸುವ ಮೂಲಕ, ಕಾಲಹರಣ ಮಾಡುತ್ತಿದೆ ಎಂದು ಆರೋಪಿಸಿದರು. ರೈತರ ಜಮೀನುಗಳನ್ನು ವಕ್ಫ್ ಬೋರ್ಡ್ ಕಬಳಿಸುತ್ತಿದೆ. ಈ ಮೂಲಕ ರೈತರ ಅನ್ನ ಕಸಿಯುವ ಕೆಲಸವನ್ನು ಕೆಲವು ಅಧಿಕಾರಿಗಳು ಮಾಡುತ್ತಿದ್ದಾರೆ. ಕಾಂಗ್ರೆಸ್ ಸರ್ಕಾರ ತುಷ್ಟೀಕರಣ ನೀತಿ ಅನುಸರಿಸುತ್ತಿರುವುದರಿಂದ ಭಯೋತ್ಪಾದಕ ಚಟುವಟಿಕೆಗಳು ನಡೆಯುತ್ತೀವೆ ಎಂದು ಅವರು ಟೀಕಿಸಿದರು.

<><><>

**ದೇಶದಲ್ಲಿ ವಕ್ಫ್ ಕಾನೂನು ಮಾಡಿದ್ದು ಸರಿ ಇಲ್ಲ. ಇದನ್ನು ರದ್ದುಪಡಿಸಲು** ಸಾಧ್ಯವಾಗದಿದ್ದರೆ ಕನಿಷ್ಠ ಪಕ್ಷ ತಿದ್ದುಪಡಿ ಮಾಡುವ ಅಗತ್ಯವಿದೆ ಎಂದು ಕೇಂದ್ರ ಆಹಾರ ಮತ್ತು ಗ್ರಾಹಕ ವ್ಯವಹಾರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಧಾರವಾಡದಲ್ಲಿ ಮಾತನಾಡಿದ ಅವರು, ಪ್ರಧಾನಿ ನೆಹರು ಅವರ ಆಡಳಿತಾವಧಿಯಲ್ಲಿ ವಕ್ಫ್ ಕಾನೂನನ್ನು ಜಾರಿಗೆ ತರಲಾಗಿದ್ದು, ಈ ಮೂಲಕ ಕಾಂಗ್ರೆಸ್ ಪಕ್ಷ ತುಷ್ಟೀಕರಣದ ರಾಜಕಾರಣ ಮಾಡುತ್ತಿದೆ. ಇದನ್ನು ರದ್ದುಪಡಿಸಿದರೆ ಹಲವು ಸಮಸ್ಯೆಗಳಿಗೆ ಪರಿಹಾರ ದೊರೆಯಲಿದೆ ಎಂದರು. ರಾಜ್ಯದಲ್ಲಿ ರೈತರ ಜಮೀನು, ಮಠ, ದೇವಸ್ಥಾನ ಮತ್ತು ಬಡಮುಸ್ಲಿಂರ ಆಸ್ತಿಯನ್ನು ಕಬಳಿಸಲು ಸಚಿವ ಜಮೀರ್ ಅಹಮ್ಮದ್ ವಕ್ಫ್ ಕಾಯ್ದೆ ಮೂಲಕ ಮುಂದಾಗಿದ್ದಾರೆ. ಇದನ್ನು ಸಹಿಸಲು ಸಾಧ್ಯವಿಲ್ಲ ಎಂದು ಅವರು ಟೀಕಿಸಿದರು.

<><><>

**ಯಾವ ರೈತರನ್ನೂ ತಮ್ಮ ಜಮೀನುಗಳಿಂದ ಒಕ್ಕಲೆಬ್ಬಿಸುವುದಿಲ್ಲ ಹಾಗೂ** ವಿಜಯಪುರ, ಯಾದಗಿರಿ ಹಾಗೂ ಧಾರವಾಡ ಜಿಲ್ಲೆಗಳಲ್ಲಿ ವಕ್ಫ್ ಆಸ್ತಿ ಎಂದು ರೈತರಿಗೆ ನೋಟಿಸ್ ನೀಡಲಾಗಿದ್ದರೆ, ಅದನ್ನು ವಾಪಸ್ಸು ಪಡೆಯಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಈ ಮಾಹಿತಿ ನೀಡಿರುವ ಅವರು, ಕಂದಾಯ ಸಚಿವ ಕೃಷ್ಣಬೈರೇಗೌಡ, ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್, ವಕ್ಫ್ ಖಾತೆ ಸಚಿವ ಜಮೀರ್ ಅಹ್ಮದ್ ಅವರು ಜಂಟಿ ಪತ್ರಿಕಾಗೋಷ್ಠಿಯನ್ನು ನಡೆಸಿ ಈ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ. ರೈತರಿಗೆ ಸಮಸ್ಯೆ ಆಗಬಾರದು ಎಂಬ ನಮ್ಮ ನಿಲುವಿನಲ್ಲಿ ಯಾವ ಬದಲಾವಣೆ ಇಲ್ಲ ಎಂದು ಹೇಳಿದ್ದಾರೆ.

<><><>

**ಅಬಕಾರಿ ಮತ್ತು ವಾಣಿಜ್ಯ ತೆರಿಗೆ ಸಂಗ್ರಹ ಗುರಿ ಸಾಧನೆಗೆ ಅಧಿಕಾರಿಗಳು** ಶ್ರಮಿಸಬೇಕು. ನಿಗದಿತ ಗುರಿ ಸಾಧನೆ ಮಾಡದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿ ವಾಣಿಜ್ಯ ತೆರಿಗೆ ಮತ್ತು ಅಬಕಾರಿ ಇಲಾಖೆಗಳ ತೆರಿಗೆ ಸಂಗ್ರಹದ ಬಗ್ಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು.

<><><>

**ರೈತರ ಕ್ಷೇಮಾಭಿವೃದ್ಧಿಗೆ ಕಾಂಗ್ರೆಸ್ ಸರಕಾರ ಅನೇಕ ಕಾರ್ಯಕ್ರಮಗಳನ್ನು** ಜಾರಿಗೆ ತಂದಿದೆ ಇದೀಗ ಪ್ರತೀ ಜಿಲ್ಲೆಗಳಲ್ಲಿ ರೈತರಿಗೆ ತರಬೇತಿ ಕೇಂದ್ರಗಳನ್ನು ಸ್ಥಾಪಿಸಲು ಸಚಿವ ಸಂಪುಟ ಒಪ್ಪಿಗೆ ಸೂಚಿಸಿದೆ ಎಂದು ಕೃಷಿ ಖಾತೆ ಸಚಿವ ಎನ್. ಚೆಲುವರಾಯಸ್ವಾಮಿ ಹೇಳಿದ್ದಾರೆ. ಹಾಸನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಈ ವರ್ಷದಿಂದ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ತರಬೇತಿ ಕೇಂದ್ರಗಳನ್ನು ತೆರೆದು, ಮಣ್ಣು ಪರೀಕ್ಷೆ ಹೆಚ್ಚಿಸಲು ಯೋಜಿಸಲಾಗಿದೆ ಜೊತೆಗೆ ಕಳೆದ ವರ್ಷ ಒಂದು ಲಕ್ಷ ಜನ ರೈತರಿಗೆ ತರಬೇತಿ ನೀಡಲಾಗಿದೆ ಮುಂದಿನ ವರ್ಷದಿಂದ ಎರಡು ಲಕ್ಷ ರೈತರಿಗೆ ತರಬೇತಿ ನೀಡುವ ಗುರಿ ಹೊಂದಲಾಗಿದ್ದು ಐದು ಲಕ್ಷ ಮಣ್ಣು ಮಾದರಿ ಪರೀಕ್ಷೆಗೆ ಒಳಪಡಿಸುವ ಗುರಿ ಹೊಂದಲಾಗಿದೆ ಎಂದರು. ಆಧುನಿಕ ಕೃಷಿ ಹಾಗೂ ಪರಿಕರಗಳ ಬಳಕೆ ಬಗ್ಗೆ ರೈತರಿಗೆ ಮಾಹಿತಿ ನೀಡಲು ಯೋಜಿಸಲಾಗಿದೆ. ಕಳೆದ ಬಾರಿ ಒಂದು ಸಾವಿರ ಕೋಟಿ ವಾಹನ ಸಬ್ಸಿಡಿ ನೀಡಲಾಗಿದೆ, 2 ಸಾವಿರದ ನೂರು ಕೋಟಿ ಹಣವನ್ನು ಇನ್ಶುರೆನ್ಸ್ ಮೂಲಕ ಹಣ ಪಾವತಿ ಮಾಡಲಾಗಿದೆ, ಇದಲ್ಲದೆ ಕೃಷಿ ಕ್ಷೇತ್ರದಲ್ಲಿ ರೈತರ ಅನುಕೂಲಕ್ಕಾಗಿ ಇನ್ನು ಹತ್ತು ಹಲವು ಹೊಸ ಯೋಜನೆಗಳನ್ನು ಜಾರಿಗೆ ತರಲು ಮುಂದಾಗಿದ್ದೇವೆ ಎಂದರು.

<><><>

**ಹುಬ್ಬಳ್ಳಿ ಭಾಗದ ಸುಮಾರು 400 ಕಿಲೋಮೀಟರ್ ಸುತ್ತಳತೆಯಲ್ಲಿನ ಉತ್ಪಾದನಾ** ಘಟಕಗಳು ದೇಶದ ಎಫ್‌ಎಂಸಿಜಿ ಸರಕುಗಳ ಪೈಕಿ ಶೇಕಡಾ 35 ಕ್ಕಿಂತ ಹೆಚ್ಚು ಮಾರುಕಟ್ಟೆ ಪಾಲನ್ನು ಹೊಂದಿವೆ. ಈ ಹಿನ್ನೆಲೆಯಲ್ಲಿ ಇಕಾಸ್ ಇನ್ಫ್ರಾ ಸಂಸ್ಥೆ (Aequs Infra)ಯ ಈ ನೂತನ ವ್ಯವಸ್ಥೆ ಈ ಭಾಗದಲ್ಲಿ ಈ ಕೈಗಾರಿಕೆಗಳ ಬಲವರ್ಧನೆ ನಿಟ್ಟಿನಲ್ಲಿ ದೊಡ್ಡ ಪಾತ್ರವಹಿಸಲಿದೆ ಎಂದು ಕೈಗಾರಿಕಾ ಖಾತೆ ಸಚಿವ ಎಂ. ಬಿ. ಪಾಟೀಲ್ ಹೇಳಿದ್ದಾರೆ. ಏಕಸ್ ಇನ್ಫ್ರಾ ಕಂಪನಿಯು

ಹುಬ್ಬಳ್ಳಿಯಲ್ಲಿ ನಿರ್ಮಿಸಿರುವ ಸಂಪೂರ್ಣ ಸುಸಜ್ಜಿತ 'ಪ್ಲಗ್ ಅಂಡ್ ಪ್ಲೇ' ಮಾದರಿಯ ಎಫ್‌ಎಂಸಿಜಿ ಉತ್ಪನ್ನಗಳ ತಯಾರಿಕಾ ಪಾರ್ಕ್‌ನ ಕಾರ್ಯಾಚರಣೆಗೆ ಬೆಂಗಳೂರಿನಲ್ಲಿ ಚಾಲನೆ ನೀಡಿ ಅವರು ಮಾತನಾಡಿದರು.

<><><>

## ಸಂಕ್ಷಿಪ್ತ ಸುದ್ದಿ

**ರಾಜ್ಯದ 221 ವಿಧಾನಸಭಾ ಕ್ಷೇತ್ರಗಳ ಕರಡು ಮತದಾರರ ಪಟ್ಟಿಯನ್ನು ಚುನಾವಣಾ** ಆಯೋಗ ಪ್ರಕಟಿಸಿದೆ. ನವೆಂಬರ್ 28 ರವರೆಗೂ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ನೀಡಲಾಗಿದೆ.

<><><><><><>